ಪ್ರಜಾ ಭಾರತ

ಕನ್ನಡ ದಿನಪತ್ರಿಕೆ

ಸತ್ಯದ ಪರ - ಪ್ರಜೆಗಳ ಧ್ವನಿ..!



ತಪ್ಪಾಗಿದ್ದರೆ ತಿದ್ದುಕೊಳ್ಳುತ್ತೇವೆ: ಮೈಸೂರು ರಾಜಮನೆತನದ ಬಗ್ಗೆ ಗೌರವವಿದೆ: ಪರಂಪರೆಯನ್ನು ಮುಂದುವರೆಸಿಕೊಂಡು ಹೋಗಬೇಕು ಎಂದ ಸಿಎಂ ಡಿ.ಕೆ.ಶಿವಕುಮಾರ್

ಸಂಪಾದಕ: ದಿನೇಶ್ ಬೆಳ್ಳಾವರ, ಮೊ: 94821 01707 Email. prajabharathanews@gmail.com ಸಹ ಸಂಪಾದಕ : ಬಿ.ಬಿ ಶಿವರಾಜು, ಮೊ: 98809 08468

Volume-01 Issue-57 HASSAN Date : 28.10.2026 WEDNESDAY Reg No.PRGI No. KNKAN/26/A6168 Page-02 Rs.1.00

ಸಂಪುಟ–01 ಸಂಚಿಕೆ–57 ಹಾಸನ ದಿನಾಂಕ: 28.10.2026 ಬುಧವಾರ ರಿ.ನಂ.PRGI No. KNKAN/26/A6168 ಪುಟ:02 ಬೆಲೆ:1.00ರೂ.

ಹಾಸನಾಂಬೆ ದರ್ಶನಕ್ಕೆ 10 ಲಕ್ಷ ಹೆಚ್ಚುವರಿ ಭಕ್ತರ ನಿರೀಕ್ಷೆ

ಈ ಬಾರಿ ಎಲ್ಲರಿಗೂ ಪೂರ್ಣ ಪ್ರಮಾಣದಲ್ಲಿ ದೊನ್ನೆ ಪ್ರಸಾದ ವಿತರಣೆ: ಸಚಿವ ಶಿವಲಿಂಗೇಗೌಡ

ಪ್ರಜಾ ಭಾರತ ವರದಿ

ಹಾಸನ: ವಿಶ್ವವಿಖ್ಯಾತ ಹಾಸನಾಂಬೆ ಜಾತ್ರಾ ಮಹೋತ್ಸವಕ್ಕೆ ಈ ಬಾರಿ ಕಳೆದ ಬಾರಿಗಿಂತ ಸುಮಾರು 10 ಲಕ್ಷಕ್ಕೂ ಹೆಚ್ಚು ಭಕ್ತರು ಆಗಮಿಸುವ ನಿರೀಕ್ಷೆಯಿದ್ದು, ಜನಸಂದಣಿ ನಿರ್ವಹಣೆ, ಸುಗಮ ದರ್ಶನ ಹಾಗೂ ಪ್ರಸಾದ ವಿತರಣೆಗೆ ಜಿಲ್ಲಾಡಳಿತ ಸಕಲ ಸಿದ್ಧತೆಗಳನ್ನು ಕೈಗೊಂಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ತಿಳಿಸಿದರು.

ಮಂಗಳವಾರ ಉತ್ಸವದ ಪೂರ್ವಸಿದ್ಧತೆಗಳನ್ನು ಪರಿಶೀಲಿಸಿದ ಬಳಿಕ ಮಾತನಾಡಿದ ಅವರು, ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ಹೊರರಾಜ್ಯಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಲಿದ್ದಾರೆ.

ಈ ಹಿನ್ನೆಲೆಯಲ್ಲಿ ದರ್ಶನ ವ್ಯವಸ್ಥೆ, ಸರತಿ ಸಾಲು, ಕುಡಿಯುವ ನೀರು, ಸ್ವಚ್ಛತೆ ಮತ್ತು ಸಂಚಾರ ನಿರ್ವಹಣೆಗೆ ವಿಶೇಷ ಆದ್ಯತೆ ನೀಡಲಾಗಿದೆ.

ನಿಗದಿತ ಅವಧಿಯೊಳಗೆ ಎಲ್ಲ ಸಿದ್ಧತೆಗಳನ್ನು ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

● ಎಲ್ಲ ಭಕ್ತರಿಗೂ ದೊನ್ನೆ ಪ್ರಸಾದದ ಭರವಸೆ

ಕಳೆದ ಬಾರಿಯ ಅನುಭವದ ಹಿನ್ನೆಲೆಯಲ್ಲಿ ಈ ಬಾರಿ ಪ್ರಸಾದ ವಿತರಣೆಗೆ ಹೆಚ್ಚಿನ ಒತ್ತು ನೀಡಲಾಗಿದೆ. ಇಸ್ಕಾನ್



ವತಿಯಿಂದ ಲಾಡುಗಳನ್ನು ಸಿದ್ಧಪಡಿಸಲಾಗುತ್ತಿದ್ದು, ಎಲ್ಲ ಭಕ್ತರಿಗೂ ಪೂರ್ಣ ಪ್ರಮಾಣದಲ್ಲಿ ದೊನ್ನೆ ಪ್ರಸಾದ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ.

ಭಕ್ತರ ಸಂಖ್ಯೆ ಹೆಚ್ಚಾದರೂ ಪ್ರಸಾದದ ಕೊರತೆಯಾಗದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ ಎಂದು ಸಚಿವರು ಭರವಸೆ ನೀಡಿದರು.

● 400 ಕುಸ್ತಿಪಟುಗಳ ಅಖಾಡದ ಅಬ್ಬರ

ಹಾಸನಾಂಬೆ ಉತ್ಸವವನ್ನು ಧಾರ್ಮಿಕ ಆಚರಣೆಗೆ ಮಾತ್ರ ಸೀಮಿತಗೊಳಿಸದೆ, ಕ್ರೀಡೆ ಮತ್ತು ಸಾಂಸ್ಕೃತಿಕ ಸಂಭ್ರಮದೊಂದಿಗೆ ಆಚರಿಸಲು ನಿರ್ಧರಿಸಲಾಗಿದೆ. ದಸರಾ ಮಾದರಿಯಲ್ಲಿ ಕ್ರೀಡೋತ್ಸವ ಆಯೋಜಿಸಲಾಗಿದ್ದು, ರಾಜ್ಯ, ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದ ಸುಮಾರು 400 ಕುಸ್ತಿಪಟುಗಳು ಕುಸ್ತಿ ಪಂದ್ಯಗಳಲ್ಲಿ ಭಾಗವಹಿಸಲಿದ್ದಾರೆ. ಇದರೊಂದಿಗೆ ಕಬಡ್ಡಿ ಮತ್ತು ವಾಲಿಬಾಲ್ ಪಂದ್ಯಗಳೂ ನಡೆಯಲಿವೆ.

● ಗ್ರಾಮೀಣ ಸಂಸ್ಕೃತಿಗೆ ವಿಶೇಷ ವೇದಿಕೆ

ಹಳ್ಳಿಕಾರ್ ಸೇರಿದಂತೆ ವಿವಿಧ ಗೋತಳಿಗಳ ಪ್ರದರ್ಶನ, ಟಗರು ಕಾಳಗದ ಪ್ರದರ್ಶನ ಹಾಗೂ ಶ್ವಾನ ಪ್ರದರ್ಶನಗಳು ಉತ್ಸವದ ಆಕರ್ಷಣೆಯಾಗಲಿವೆ.

400 ಕುಸ್ತಿಪಟುಗಳಿಂದ ಸೆಣಸಾಟ; ಕ್ರೀಡೆ, ಜಾನಪದ ಸಂಸ್ಕೃತಿಗೆ ಉತ್ಸವದ ಮೆರುಗು

ಗ್ರಾಮೀಣ ಕ್ರೀಡೆ, ಜಾನಪದ ಕಲೆ ಮತ್ತು ಸಂಸ್ಕೃತಿಗೆ ಉತ್ತೇಜನ ನೀಡುವ ಉದ್ದೇಶದಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

● ಸಮನ್ವಯಕ್ಕೆ ಜಿಲ್ಲಾಡಳಿತದ ಒತ್ತು

ಲಕ್ಷಾಂತರ ಭಕ್ತರ ಆಗಮನದ ನಿರೀಕ್ಷೆಯ ಹಿನ್ನೆಲೆಯಲ್ಲಿ ಯಾವುದೇ ಗೊಂದಲಕ್ಕೆ ಅವಕಾಶವಾಗದಂತೆ ವಿವಿಧ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿವೆ. ಭಕ್ತರಿಗೆ ಸುಗಮ ದರ್ಶನ, ಅಗತ್ಯ ಸೌಲಭ್ಯಗಳು ಹಾಗೂ ಉತ್ತಮ ಅನುಭವ ಕಲ್ಪಿಸುವುದು ಜಿಲ್ಲಾಡಳಿತದ ಮುಖ್ಯ ಗುರಿಯಾಗಿದೆ ಎಂದು ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಸಂಸದ ಶ್ರೇಯಸ್ ಎಂ. ಪಟೇಲ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಡಿಸಿಎಂ ಪರಮೇಶ್ವರ್ ಆರೋಗ್ಯದಲ್ಲಿ ಸುಧಾರಣೆ: ಆಸ್ಪತ್ರೆಯಿಂದ ಬಿಡುಗಡೆ

ಪ್ರಜಾ ಭಾರತ ವರದಿ



ಬೆಂಗಳೂರು: ಹಠಾತ್ ಅನಾರೋಗ್ಯದಿಂದ ವೈದೇಹಿ ಆಸ್ಪತ್ರೆಗೆ ದಾಖಲಾಗಿದ್ದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರ ಆರೋಗ್ಯದಲ್ಲಿ ಚೇತರಿಕೆ ಕಂಡುಬಂದಿದ್ದು, ಇಂದು ಸಂಜೆ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಲಿದ್ದಾರೆ ಎಂದು ಚಿಕಿತ್ಸೆ ನೀಡುತ್ತಿರುವ ವೈದ್ಯ ಡಾ. ಶ್ರೀನಿವಾಸ್ ತಿಳಿಸಿದ್ದಾರೆ.

ತೀವ್ರ ಸುಸ್ತು ಹಾಗೂ ಹೃದಯ ಬಡಿತ ನಿಮಿಷಕ್ಕೆ 160ರಿಂದ 170ಕ್ಕೆ ಏರಿಕೆಯಾಗಿದ್ದರಿಂದ ಅವರನ್ನು ಆಸ್ಪತ್ರೆಗೆ ದಾಖಲಿಸಿ, ತಕ್ಷಣ ಇಸಿಜಿ ಸೇರಿದಂತೆ ಅಗತ್ಯ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಿ ಚಿಕಿತ್ಸೆ ನೀಡಲಾಗಿತ್ತು.

ಸದ್ಯ ಅವರ ಇಸಿಜಿ ಹಾಗೂ ಇತರ ಆರೋಗ್ಯ ಪರೀಕ್ಷೆಗಳ ವರದಿಗಳು ಸಾಮಾನ್ಯವಾಗಿವೆ. ಅವರು ಆರೋಗ್ಯವಾಗಿದ್ದು, ಆಹಾರ ಸೇವಿಸಿ ವಿಶ್ರಾಂತಿ ಪಡೆಯುತ್ತಿದ್ದಾರೆ. ಯಾವುದೇ ಆತಂಕ ಪಡುವ ಅಗತ್ಯವಿಲ್ಲದಿದ್ದರೂ, ಮುನ್ನೆಚ್ಚರಿಕೆಯಾಗಿ ಮುಂದಿನ ಎರಡು ದಿನ ಸಂಪೂರ್ಣ ವಿಶ್ರಾಂತಿ ಪಡೆಯುವಂತೆ ವೈದ್ಯರು ಸಲಹೆ ನೀಡಿದ್ದಾರೆ.

ಪರಮೇಶ್ವರ್ ಅವರ ಆರೋಗ್ಯ ಸುಧಾರಿಸಿರುವುದು ಅವರ ಅಭಿಮಾನಿಗಳು ಹಾಗೂ ಬೆಂಬಲಿಗರಲ್ಲಿ ನೆಮ್ಮದಿ ಮೂಡಿಸಿದೆ.

ವೈಯಕ್ತಿಕ ವಿಚಾರಗಳಿಗೆ ಸಂಬಂಧಪಟ್ಟವರೇ ಉತ್ತರಿಸಲಿ; ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ



ಪ್ರಜಾ ಭಾರತ ವರದಿ

ಹಾಸನ: ಸ್ಟಿಂಗ್ ಆಪರೇಷನ್ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ ಸತ್ಯಾಸತ್ಯತೆಯನ್ನು ಬಹಿರಂಗಪಡಿಸಬೇಕು. ತಪ್ಪಿತಸ್ಥರು ಯಾರೇ ಆಗಿದ್ದರೂ ಶಿಕ್ಷೆಯಾಗಬೇಕು ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಮಾಜಿ ಶಾಸಕ ಪ್ರೀತಂಗೌಡ ಆಗ್ರಹಿಸಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿ ವೈಯಕ್ತಿಕ ವಿಚಾರಗಳನ್ನು ಮುಂದಿಟ್ಟುಕೊಂಡು ರಾಜಕಾರಣ ಮಾಡುವ ಪಕ್ಷವಲ್ಲ. ತತ್ವ, ಸಿದ್ಧಾಂತ ಹಾಗೂ ಜನಸಾಮಾನ್ಯರ ಸಮಸ್ಯೆಗಳ ಪರವಾಗಿ ಹೋರಾಡುವುದು ಪಕ್ಷದ ಉದ್ದೇಶವಾಗಿದೆ ಎಂದರು.

ರಾಜ್ಯಾಧ್ಯಕ್ಷ ವಿಜಯೇಂದ್ರ ನೇತೃತ್ವದಲ್ಲಿ ಬರಗಾಲ, ರೈತರ ಸಮಸ್ಯೆಗಳು ಸೇರಿದಂತೆ ವಿವಿಧ ಜನಪರ ವಿಚಾರಗಳ ಕುರಿತು ಹೋರಾಟ ನಡೆಸಲಾಗಿದೆ. ವಿರೋಧ ಪಕ್ಷವಾಗಿ ರಾಜ್ಯದ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ಹಲವು ವೈಯಕ್ತಿಕ ವಿಚಾರಗಳು ಮುನ್ನೆಲೆಗೆ ಬಂದಿದ್ದು, ಸಂಬಂಧಪಟ್ಟವರು ಈ ಬಗ್ಗೆ ಉತ್ತರಿಸುವುದು ಸೂಕ್ತ. ಪ್ರಕರಣದ ತನಿಖೆಗೆ ಸರ್ಕಾರ ಆದೇಶಿಸಿದ್ದು, ತನಿಖೆಯಿಂದ ಸತ್ಯ ಹೊರಬರಬೇಕು. ಮಾಜಿ ಮುಖ್ಯಮಂತ್ರಿಗಳಿಗೆ ಅಗೌರವ ತರುವಂತಹ ಘಟನೆ ನಡೆದಿದ್ದರೆ ಅದನ್ನೂ ತನಿಖೆಯ ವ್ಯಾಪ್ತಿಗೆ ತರಬೇಕು ಎಂದು ಹೇಳಿದರು.

ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಎನ್‌ಡಿಎ ಮೈತ್ರಿಕೂಟದ ನಾಯಕರಾಗಿದ್ದು, ಅವರ ಹೋರಾಟಕ್ಕೆ ಬಿಜೆಪಿ ಸಕ್ರಿಯವಾಗಿ ಬೆಂಬಲ ನೀಡಲಿದೆ. ವಿಜಯೇಂದ್ರ ನೇತೃತ್ವದಲ್ಲಿ ಮೈತ್ರಿಕೂಟದ ನಾಯಕರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಲಿದ್ದಾರೆ. ಪ್ರಕರಣದಲ್ಲಿ ರಾಜಕೀಯ ಬೆರೆಸದೆ, ತಪ್ಪಿತಸ್ಥರನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪ್ರೀತಂಗೌಡ ಒತ್ತಾಯಿಸಿದರು.



ಪ್ರಜಾ ಭಾರತ ವರದಿ

ಸಕಲೇಶಪುರ: ಸಕಲೇಶಪುರ ವಿಧಾನಸಭಾ ಕ್ಷೇತ್ರದ ಅಂತಿಮ ಮತದಾರರ ಪಟ್ಟಿಯಲ್ಲಿ 1,90,162 ಮತದಾರರು ದಾಖಲಾಗಿದ್ದಾರೆ. ಇವರಲ್ಲಿ ಮಹಿಳಾ ಮತದಾರರ ಸಂಖ್ಯೆಯೇ ಹೆಚ್ಚಿದ್ದು, 18,066 ಮತದಾರರ ವಿವರಗಳನ್ನು ಪರಿಷ್ಕರಣೆ ವೇಳೆ ಗುರುತಿಸಲಾಗಿದೆ ಎಂದು ಉಪವಿಭಾಗಾಧಿಕಾರಿ ಹುಲ್ಲುಮನಿ ತಿಮ್ಮಣ್ಣ ತಿಳಿಸಿದರು.

ಪಟ್ಟಣದ ಉಪವಿಭಾಗಾಧಿಕಾರಿ ಕಚೇರಿಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ಕರಡು ಪಟ್ಟಿಯಲ್ಲಿ 1,87,196 ಮತದಾರರಿದ್ದರು. ಪರಿಷ್ಕರಣೆ ಬಳಿಕ ಅಂತಿಮ ಪಟ್ಟಿಯಲ್ಲಿ 94,072 ಪುರುಷರು, 96,088 ಮಹಿಳೆಯರು ಹಾಗೂ 2 ತೃತೀಯ ಲಿಂಗದ ಮತದಾರರು ಸೇರಿ ಒಟ್ಟು 1,90,162 ಮತದಾರರಿದ್ದಾರೆ. ಪುರುಷರಿಗಿಂತ ಮಹಿಳಾ ಮತದಾರರ ಸಂಖ್ಯೆ 2,016ರಷ್ಟು ಹೆಚ್ಚಿದೆ ಎಂದರು.

ಹಾಸನಾಂಬೆ ದರ್ಶನಕ್ಕೆ ಸ್ಥಳೀಯರಿಗೆ ಮೊದಲ ಆದ್ಯತೆ ನೀಡಿ

ಜಾತ್ರಾ ಮಹೋತ್ಸವದ ಟೆಂಡರ್ ಪ್ರಕ್ರಿಯೆ ಪಾರದರ್ಶಕವಾಗಿರಲಿ: ಅಗಿಲೆ ಯೋಗೀಶ್ ಆಗ್ರಹ

ಪ್ರಜಾ ಭಾರತ ವರದಿ

ಹಾಸನ: ಹಾಸನಾಂಬೆ ದೇವಿಯ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಸ್ಥಳೀಯ ಭಕ್ತರಿಗೆ ಮೊದಲ ಆದ್ಯತೆಯಲ್ಲಿ ದರ್ಶನಕ್ಕೆ ಅವಕಾಶ ಕಲ್ಪಿಸಬೇಕು ಹಾಗೂ ಜಾತ್ರೆಯ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸಬೇಕು ಎಂದು ಆಮ್ ಆದ್ಮಿ ಪಾರ್ಟಿಯ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೀಶ್ ಆಗ್ರಹಿಸಿದರು.

ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹೊರ ಜಿಲ್ಲೆ ಹಾಗೂ ರಾಜ್ಯಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುವುದು ಸಂತಸದ ಸಂಗತಿಯಾದರೂ, ಹಾಸನದ ಸ್ಥಳೀಯ ಭಕ್ತರು ದೇವಿಯ ದರ್ಶನದಿಂದ ವಂಚಿತರಾಗಬಾರದು. ಹೀಗಾಗಿ ಜಾತ್ರೆಯ ಮೊದಲ 3 ದಿನ ಸ್ಥಳೀಯರಿಗೆ ವಿಶೇಷ ದರ್ಶನ ಅಥವಾ ಪ್ರತ್ಯೇಕ ಸರತಿ ಸಾಲಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಜಾತ್ರೆಯ ಕಾಮಗಾರಿಗಳ ಟೆಂಡರ್‌ಗಳನ್ನು ನಿರ್ದಿಷ್ಟ ವ್ಯಕ್ತಿಗಳಿಗೆ ನೀಡಲಾಗುತ್ತಿದೆ ಎಂಬ ಆರೋಪಗಳಿದ್ದು, ಇದರಿಂದ ಇತರ ಗುತ್ತಿಗೆದಾರರಿಗೆ ಅನ್ಯಾಯವಾಗುತ್ತಿದೆ.



ಟೆಂಡರ್ ಪ್ರಕ್ರಿಯೆಯಲ್ಲಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಅರ್ಹ ಗುತ್ತಿಗೆದಾರರಿಗೆ ಸಮಾನ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಈ ಕುರಿತು ಕಳೆದ ವರ್ಷವೂ ವಿವಿಧ ಸಂಘಟನೆಗಳು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದ್ದರೂ ಗಮನಾರ್ಹ ಬದಲಾವಣೆಯಾಗಿಲ್ಲ.

ಈ ಬಾರಿಯಾದರೂ ಸ್ಥಳೀಯ ಭಕ್ತರ ಧಾರ್ಮಿಕ ಭಾವನೆಗಳಿಗೆ ಗೌರವ ನೀಡಿ, ದರ್ಶನ ವ್ಯವಸ್ಥೆ ಸುಧಾರಿಸುವುದರ ಜೊತೆಗೆ ಟೆಂಡರ್ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಎಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಆಮ್ ಆದ್ಮಿ ಪಾರ್ಟಿಯ ಮುಖಂಡರಾದ ವಿಕಾಸ್, ಮಧು, ಖಾದರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮಳೆ ಮಲ್ಲೇಶ್ವರ ದೇವಸ್ಥಾನಕ್ಕೆ ವಾಹನ ಸಂಚಾರ ನಿಷೇಧ

ಅ.25ರಿಂದ ನ.11ರವರೆಗೆ ಆದೇಶ ಜಾರಿ; ಭಕ್ತರಿಗೆ ಕಾಲ್ನಡಿಗೆಯಲ್ಲೇ ದರ್ಶನಕ್ಕೆ ಅವಕಾಶ



ಹಾಸನ: ಹಾಸನಾಂಬೆ ಮತ್ತು ಶ್ರೀ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ, ಸಾಲಗಾಮೆ ಹೋಬಳಿಯ ಸೀಗೆಗುಡ್ಡ ಮೀಸಲು ಅರಣ್ಯ ಪ್ರದೇಶದಲ್ಲಿರುವ ಪ್ರಸಿದ್ಧ ಮಳೆ ಮಲ್ಲೇಶ್ವರ ದೇವಸ್ಥಾನಕ್ಕೆ ತೆರಳುವ ರಸ್ತೆಗಳಲ್ಲಿ ಖಾಸಗಿ ಹಾಗೂ ಪ್ರವಾಸಿ ವಾಹನಗಳ ಸಂಚಾರವನ್ನು ನಿಷೇಧಿಸಿ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಆದೇಶ ಹೊರಡಿಸಿದ್ದಾರೆ.

ಅಕ್ಟೋಬರ್ 25ರಿಂದ ನವೆಂಬರ್ 11ರವರೆಗೆ ನಿಷೇಧ ಜಾರಿಯಲ್ಲಿರಲಿದೆ. 'ಪ್ರೇಮದ ಊರಲ್ಲಿ' ಕನ್ನಡ ಸಿನಿಮಾ ಬಿಡುಗಡೆಯಾದ ಬಳಿಕ ದೇವಸ್ಥಾನಕ್ಕೆ ಪ್ರವಾಸಿಗರ ಸಂಖ್ಯೆ ಗಣನೀಯವಾಗಿ ಹೆಚ್ಚಿದ್ದು, ಪ್ರಸ್ತುತ ಪ್ರತಿದಿನ 5,000ಕ್ಕೂ ಹೆಚ್ಚು ಜನರು ಭೇಟಿ ನೀಡುತ್ತಿದ್ದಾರೆ ಎನ್ನಲಾಗಿದೆ.

ಬೆಟ್ಟಕ್ಕೆ ತೆರಳುವ ರಸ್ತೆ ಕಿರಿದಾಗಿದ್ದು, ಕಡಿದಾದ ಇಳಿಜಾರು ಹಾಗೂ ತಡೆಗೋಡೆಗಳ ಕೊರತೆಯಿಂದ ಅಪಾಯಕಾರಿಯಾಗಿದೆ. ಹೀಗಾಗಿ ಪೊಲೀಸ್ ಮತ್ತು ಅರಣ್ಯ ಇಲಾಖೆಗಳ ಶಿಫಾರಸಿನ ಮೇರೆಗೆ ಮುಂಜಾಗ್ರತಾ ಕ್ರಮವಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಬೇಲೂರು ಕಡೆಯ ಕಲ್ಕೆರೆ–ವೀರಾಪುರ ರಸ್ತೆ, ಹಳೇಬೀಡು ಕಡೆಯ ಸೀಗೆ–ವೀರಾಪುರ ರಸ್ತೆ ಹಾಗೂ ಗೋಳೇನಹಳ್ಳಿ ಮಾರ್ಗವಾಗಿ ಸೀಗೆಗುಡ್ಡಕ್ಕೆ ತೆರಳುವ ರಸ್ತೆಗಳಲ್ಲಿ ವಾಹನ ಸಂಚಾರ ನಿರ್ಬಂಧಿಸಲಾಗಿದೆ. ನಿಷೇಧಿತ ಅವಧಿಯಲ್ಲಿ ಭಕ್ತರು ಕಾಲ್ನಡಿಗೆಯಲ್ಲೇ ದೇವಸ್ಥಾನಕ್ಕೆ ತೆರಳಿ ದರ್ಶನ ಪಡೆಯಬಹುದಾಗಿದೆ.ಮೋಟಾರು ವಾಹನ ಕಾಯ್ದೆ 1988ರ ಸೆಕ್ಷನ್ 115 ಹಾಗೂ 1989ರ ನಿಯಮ 221ಎ(5) ರ ಅಡಿಯಲ್ಲಿ ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಆದೇಶ ಹೊರಡಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು

ಕಾನೂನು ಅರಿವು ಪಡೆದು ಹಕ್ಕುಗಳನ್ನು ರಕ್ಷಿಸಿಕೊಳ್ಳಿ

ಇತರರಿಗೂ ನೆರವಾಗಿ: ವಿದ್ಯಾರ್ಥಿಗಳಿಗೆ ನ್ಯಾಯಾಧೀಶೆ ಹೇಮಾವತಿ ಕರೆ



ಪ್ರಜಾ ಭಾರತ ವರದಿ

ಹಾಸನ: ವಿದ್ಯಾರ್ಥಿಗಳು ಕಾನೂನಿನ ಅರಿವು ಪಡೆದು ತಮ್ಮ ಹಕ್ಕುಗಳನ್ನು ರಕ್ಷಿಸಿಕೊಳ್ಳುವುದರ ಜೊತೆಗೆ, ಇತರರಿಗೂ ನೆರವಾಗುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೊಡುಗೆ ನೀಡಬೇಕು ಎಂದು ನ್ಯಾಯಾಧೀಶೆ ಹೇಮಾವತಿ ಕರೆ ನೀಡಿದರು.

ನಗರದ ಸಂತ ಜೋಸೆಫರ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಮಂಗಳವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸಾರ್ವಜನಿಕ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಮಕ್ಕಳ ರಕ್ಷಣಾ ಘಟಕ, ಮಕ್ಕಳ ಕಲ್ಯಾಣ ಸಮಿತಿ, ಪ್ರಚೋದನ ಸಾಮಾಜಿಕ ಸೇವಾ ಕೇಂದ್ರ, ಪೊಲೀಸ್ ಇಲಾಖೆ ಹಾಗೂ ಶಾಲೆಯ ಸಹಯೋಗದಲ್ಲಿ ಆಯೋಜಿಸಿದ್ದ ಸುರಕ್ಷಿತ ಬಾಲ್ಯ ಅಭಿಯಾನ ಮತ್ತು ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ (ಪೋಕ್ಸೊ) ಕುರಿತು ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಮೇಲಿನ ದೌರ್ಜನ್ಯ ಹಾಗೂ ಕಾನೂನುಬಾಹಿರ ಕೃತ್ಯಗಳನ್ನು ತಡೆಗಟ್ಟುವಲ್ಲಿ ಕಾನೂನಿನ ಪಾತ್ರ ಮಹತ್ವದ್ದಾಗಿದೆ. ಮನೆ ಅಥವಾ ಸುತ್ತಮುತ್ತಲಿನ ಪರಿಸರದಲ್ಲಿ ಮಕ್ಕಳ ಮೇಲೆ ದೌರ್ಜನ್ಯ ನಡೆದರೆ ಅದನ್ನು ಮುಚ್ಚಿಡದೆ ಪೋಷಕರು, ಶಿಕ್ಷಕರು ಅಥವಾ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಬೇಕು.

ಸಂತ್ರಸ್ತರಿಗೆ ನ್ಯಾಯ ಮತ್ತು ರಕ್ಷಣೆ ಪಡೆಯುವ ಮಾರ್ಗಗಳ ಬಗ್ಗೆ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು ಎಂದು ಹೇಳಿದರು.

ಶಿಕ್ಷಣವು ಕೇವಲ ಉದ್ಯೋಗ ಪಡೆಯುವ ಸಾಧನವಲ್ಲ. ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಲು, ಸಾಮಾಜಿಕ ಜವಾಬ್ದಾರಿ ಬೆಳೆಸಿಕೊಳ್ಳಲು ಹಾಗೂ ಜವಾಬ್ದಾರಿಯುತ ನಾಗರಿಕರಾಗಲು ಶಿಕ್ಷಣ ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಸಂವಿಧಾನ ಮತ್ತು ಕಾನೂನುಗಳ ಕುರಿತು ಓದುವ ಅಭ್ಯಾಸ ಬೆಳೆಸಿಕೊಂಡು, ಹಕ್ಕುಗಳ ಜೊತೆಗೆ ಕರ್ತವ್ಯಗಳ ಬಗ್ಗೆಯೂ ಅರಿವು ಹೊಂದಬೇಕು.

ಸರ್ಕಾರ ಒದಗಿಸುವ ಶಿಕ್ಷಣದ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಕ್ಕಳ ಹಕ್ಕುಗಳ ಕುರಿತು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜಿ.ಕೆ. ದಾಕ್ಷಾಯಿಣಿ ಪ್ರತಿಜ್ಞಾವಿಧಿ ಬೋಧಿಸಿದರು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಬಲರಾಮ್ ಕೆ.ಎನ್., ಉಪ ಪೊಲೀಸ್ ಅಧೀಕ್ಷಕ ಹಾಗೂ ವಿಶೇಷ ಬಾಲ ಪೊಲೀಸ್ ಘಟಕದ ಅಧಿಕಾರಿ ಗಂಗಾಧರಪ್ಪ ಆರ್.ವಿ., ಪ್ರಚೋದನ ಸಾಮಾಜಿಕ ಸೇವಾ ಸಂಸ್ಥೆಯ ನಿರ್ದೇಶಕ ಪೌಲೋಸ್ ಸಿ.ಸಿ., ಸಂತ ಜೋಸೇಫ್ ಶಾಲೆಯ ಮುಖ್ಯೋಪಾಧ್ಯಾಯ ಫಾದರ್ ಲಿಯೋ ಪೆರೇರಾ, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ವಿವಿಧ ಇಲಾಖೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು. ಅವೇಶ್ ಪಾಷಾ ಸ್ವಾಗತಿಸಿದರು. ಜೀವನ್ ಕಾರ್ಯಕ್ರಮ ನಿರೂಪಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಆರಂಭ

ಒಂದು ಸ್ಥಾನಕ್ಕೆ ಗರಿಷ್ಠ ಐವರಿಗೆ ಅರ್ಜಿ ಸಲ್ಲಿಸಲು ಅವಕಾಶ: ಗಾಯತ್ರಿ ಶಾಂತಗೌಡ

ಪ್ರಜಾ ಭಾರತ ವರದಿ

ಹೊಳೆನರಸೀಪುರ: ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವ ಉದ್ದೇಶದಿಂದ ಬ್ಲಾಕ್ ಕಾಂಗ್ರೆಸ್ ಹಾಗೂ ಮುಂಚೂಣಿ ಘಟಕಗಳ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಆರಂಭಿಸಲಾಗಿದ್ದು, ಕಾರ್ಯಕರ್ತರಿಂದ ಅಭಿಪ್ರಾಯ ಸಂಗ್ರಹಿಸಿ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ ಎಂದು ಗಾಯತ್ರಿ ಶಾಂತಗೌಡ ತಿಳಿಸಿದರು.

ಪಟ್ಟಣದ ಜಯಲಕ್ಷ್ಮಿ ರೈಸ್ ಮಿಲ್ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಬಿ. ಶಶಿಧರ್ ಅಧ್ಯಕ್ಷತೆಯಲ್ಲಿ ನಡೆದ 'ಸೃಜನ್ ಸಂಘಟನ್ ಅಭಿಯಾನ್' ಸಭೆಯಲ್ಲಿ ಅವರು ಮಾತನಾಡಿದರು. ಪಕ್ಷದ ಸಂಘಟನೆಗೆ ಪ್ರಾಮಾಣಿಕವಾಗಿ ಶ್ರಮಿಸುವ ಕಾರ್ಯಕರ್ತರಿಗೆ ಅಧ್ಯಕ್ಷರ ಆಯ್ಕೆಯಲ್ಲಿ ಆದ್ಯತೆ ನೀಡಲಾಗುವುದು. ಒಂದು ಸ್ಥಾನಕ್ಕೆ ಗರಿಷ್ಠ ಐವರು ಅರ್ಜಿ ಸಲ್ಲಿಸಬಹುದಾಗಿದ್ದು, ಮುಖಂಡರು ಹಾಗೂ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಿದ ಬಳಿಕ ಆಯ್ಕೆ ಪ್ರಕ್ರಿಯೆ ಮುಂದುವರಿಸಲಾಗುವುದು ಎಂದರು.



ಸಭೆಯಲ್ಲಿ ಕೆಪಿಸಿಸಿ ಉಸ್ತುವಾರಿಗಳಾದ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಚ್. ಮರಿಯೋಜಿರಾವ್, ಮೈಸೂರು ಮತ್ತು ಚಿಕ್ಕಮಗಳೂರು ಜಿಲ್ಲಾ ಕಾಂಗ್ರೆಸ್‌ನ ಮಾಜಿ ಅಧ್ಯಕ್ಷ ಡಾ. ವಿಜಯಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎಚ್.ಟಿ. ಲಕ್ಷ್ಮಣ್ ಹಾಗೂ ವಿಶ್ವನಾಥ್ ಉಪಸ್ಥಿತರಿದ್ದರು.

ಹೊಳೆನರಸೀಪುರ, ದುದ್ದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನಗಳ ಆಕಾಂಕ್ಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗಿ ವೀಕ್ಷಕರ ಮುಂದೆ ಅರ್ಜಿ ಸಲ್ಲಿಸಲು ಆಸಕ್ತಿ ತೋರಿದರು.

ಪ್ರಜಾ ಭಾರತ
ಶುಭ ನುಡಿ

ನಮ್ಮ ಒಳ್ಳೆಯತನವೇ ನಮ್ಮ ನಿಜವಾದ ಸಂಪತ್ತು, ನಮ್ಮ ಪ್ರಾಮಾಣಿಕತೆಯೇ ನಮ್ಮ ಶಕ್ತಿ. ಕಾಲ ಬದಲಾಗಬಹುದು, ಆದರೆ ಒಳ್ಳೆಯ ಗುಣಕ್ಕೆ ಎಂದಿಗೂ ಬೆಲೆ ಕಡಿಮೆಯಾಗದು..!!

ಯುವನಿಧಿ ಫಲಾನುಭವಿಗಳ ವಿವರ

ಹಾಸನ :ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲೆಯಲ್ಲಿ ಯುವನಿಧಿ ಯೋಜನೆಗೆ ಸಂಬಂಧಿಸಿದಂತೆ ಹಾಸನ ಜಿಲ್ಲೆಯಲ್ಲಿ ಜನವರಿ 2024 ರಿಂದ ಆಗಸ್ಟ್-2026ರ ಮಾಹೆಯ ಅಂತ್ಯದ ವರೆಗೆ ನೇರ ನಗದು ವರ್ಗಾವಣೆಯಾಗಿರುವ ಡಿಪ್ಲೋಮಾ ಫಲಾನುಭವಿಗಳು-1726, ನೇರ ನಗದು- 25,89,000, ಪದವಿ ಫಲಾನುಭವಿಗಳು-112864, ನೇರ ನಗದು- 33,85,92,000, ಒಟ್ಟು ಫಲಾನುಭವಿಗಳು-114590 ನೇರ ನಗದು-34,11,81,000 ವರ್ಗಾವಣೆಯಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ಹಾಸನಾಂಬೆ ಜಾತ್ರೆಯಲ್ಲಿ ಸ್ಥಳೀಯರಿಗೆ ಆದ್ಯತೆ ನೀಡಿ

ಸಿದ್ದೇಶ್ವರ ಸ್ವಾಮಿ ದೇವಸ್ಥಾನದ ಬಾಗಿಲು ಮುಚ್ಚಬೇಡಿ; ಕುಂಕುಮ, ಹೂವು ವಿತರಿಸಲು ಆಗ್ರಹಿಸಿ ಬೃಹತ್ ಪ್ರತಿಭಟನೆ

ಪ್ರಜಾ ಭಾರತ ವರದಿ

ಹಾಸನ: ಹಾಸನಾಂಬೆ ಜಾತ್ರಾ ಮಹೋತ್ಸವದಲ್ಲಿ ಸ್ಥಳೀಯ ಭಕ್ತ-ರಿಗೆ ಪ್ರತ್ಯೇಕ ಸಮಯದಲ್ಲಿ ದರ್ಶನಕ್ಕೆ ಅವಕಾಶ ಕಲ್ಪಿಸಬೇಕು, ಸಿದ್ದೇಶ್ವರ ಸ್ವಾಮಿ ದೇವಸ್ಥಾನದ ಬಾಗಿಲು ಮುಚ್ಚಬಾರದು ಹಾಗೂ ಭಕ್ತರಿಗೆ ಕುಂಕುಮ ಮತ್ತು ಹೂವು ವಿತರಿಸಬೇಕು ಎಂದು ಆಗ್ರಹಿಸಿ ವಿಶ್ವ ಹಿಂದೂ ಪರಿಷತ್, ಭಜರಂಗದಳ ಸೇರಿದಂತೆ ವಿವಿಧ ಹಿಂದೂಪರ ಹಾಗೂ ಧಾರ್ಮಿಕ ಸಂಘಟನೆಗಳ ನೇತೃತ್ವದಲ್ಲಿ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ಜಾತ್ರಾ ಮಹೋತ್ಸವದ ನಿರ್ವಹಣೆ ಹಾಗೂ ಗುತ್ತಿಗೆ ಪ್ರಕ್ರಿಯೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದ ಪ್ರತಿಭಟನಾಕಾರರು, ಜಿಲ್ಲಾಡಳಿತದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ನಗರದ ಹೇಮಾವತಿ ಪ್ರತಿಮೆ ಬಳಿಯಿಂದ ಆರಂಭವಾದ ಮೆರವಣಿಗೆ ಸುಭಾಷ್ ವೃತ್ತ, ಕಸ್ತೂರಬಾ ರಸ್ತೆ ಹಾಗೂ ಗಾಂಧಿಬಜಾರ್ ಮೂಲಕ ಎನ್.ಆರ್. ವೃತ್ತ ತಲುಪಿತು. ಅಲ್ಲಿ



ರಸ್ತೆ ತಡೆ ನಡೆಸಿ ಮಾನವ ಸರಪಳಿ ನಿರ್ಮಿಸಿ ಘೋಷಣೆಗಳನ್ನು ಕೂಗಿದರು. ವರ್ತಕರು ಅಂಗಡಿ-ಮುಂಗಟ್ಟುಗಳನ್ನು ಮುಚ್ಚಿ ಪ್ರತಿಭಟನೆಗೆ ಬೆಂಬಲ ಸೂಚಿಸಿದರು.

ಮಾಜಿ ಶಾಸಕ ಹಾಗೂ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಜೆ. ಗೌಡ ಮಾತನಾಡಿ, ಹಾಸನಾಂಬೆ ಸ್ಥಳೀಯರ ಗ್ರಾಮ ದೇವತೆಯಾಗಿದ್ದು, ಜಿಲ್ಲೆಯ ಭಕ್ತರಿಗೆ ದರ್ಶನದಲ್ಲಿ ಆದ್ಯ ತೆ ನೀಡಬೇಕು.

ಈಗಿರುವ 1,000 ವಿಶೇಷ ದರ್ಶನದ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿ, ಸ್ಥಳೀಯರಿಗೆ ಪ್ರತ್ಯೇಕ ಸಮಯ ನಿಗದಿಪಡಿಸಬಹುದು. ಆ ಧಾರ್ ಕಾರ್ಡ್ ಮೂಲಕ ಸ್ಥಳೀಯರನ್ನು ಗುರುತಿಸಿ ದರ್ಶನಕ್ಕೆ ಅವಕಾಶ ಕಲ್ಪಿಸಬೇಕು. ಜಿಲ್ಲಾಧಿಕಾರಿ, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸ್ಥಳೀಯ ಶಾಸಕರು ಸಭೆ ನಡೆಸಿ ಅಕ್ಟೋಬರ್ 28ರೊಳಗೆ ಸೂಕ್ತ ನಿರ್ಧಾರ ಕೈಗೊಳ್ಳಬೇಕು. ಇಲ್ಲದಿದ್ದರೆ ಹೋರಾಟ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ಮಾತನಾಡಿ, ಹಾಸನಾಂಬೆ ಜಾತ್ರೆಗೆ ಐತಿಹಾಸಿಕ ಹಾಗೂ ಧಾರ್ಮಿಕ ಮಹತ್ವವಿದೆ. ಸ್ಥಳೀಯ ನಿವಾಸಿಗಳಿಗೆ ಸಂಜೆ 3ರಿಂದ ರಾತ್ರಿ 9ರವರೆಗೆ ದರ್ಶನಕ್ಕೆ ಅವಕಾಶ ಕಲ್ಪಿಸುವ ಮೂಲಕ ಅವರ ಧಾರ್ಮಿಕ ಭಾವನೆಗಳಿಗೆ ಗೌರವ ನೀಡಬೇಕು. ಈಗಿರುವ ವ್ಯವಸ್ಥೆಯಲ್ಲೇ ಸ್ಥಳೀಯರಿಗೆ ಆದ್ಯತೆ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ನಗರಸಭೆ ಮಾಜಿ ಅಧ್ಯಕ್ಷ ಆರ್. ಮೋಹನ್, ವಿಶ್ವ ಹಿಂದೂ ಪರಿಷತ್ತಿನ ಪ್ರಾಂತ ಸಹಕಾರ್ಯದರ್ಶಿ ಮಹಿಪಾಲ್, ರಕ್ಷಿತ್ ಭಾರದ್ವಜ್, ಪ್ರಣವ್ ಭಾರದ್ವಜ್, ಮಂಜು, ತೇಜಸ್, ಟಿ.ಎಚ್. ಚಂದ್ರಶೇಖರ್, ಎಚ್.ಎಸ್. ಬಾಲಸುಬ್ರಹ್ಮಣ್ಯ ಪ್ರಸಾದ್, ದಯಾನಂದ್, ವಾಸುದೇವ್, ಎಚ್. ಎನ್. ನಾಗೇಶ್, ಚನ್ನಕೇಶವ, ರಾಜೀವ್, ರಾಜವೆಂಕಟೇಶ್, ಸುರೇಶ್ ಗೌಡ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.

ನ.1ರಂದು ವಿಖನಸಾಚಾರ್ಯರ ಜಯಂತ್ಯುತ್ಸವ

ಪ್ರಜಾ ಭಾರತ ವರದಿ

ಹೊಳೆನರಸೀಪುರ: ಪಟ್ಟಣದ ಲಕ್ಷ್ಮೀನರಸಿಂಹಸ್ವಾಮಿ ದೇವಾಲಯದ ಆವರಣದಲ್ಲಿರುವ ವಿಖನಸಾಚಾರ್ಯರ ಮೂರ್ತಿಯ ಸನ್ನಿಧಿಯಲ್ಲಿ ನ.1ರಂದು ಜಯಂತ್ಯುತ್ಸವ ಆಯೋಜಿಸಲಾಗಿದೆ.



ಜಯಂತಿ ಅಂಗವಾಗಿ ಬೆಳಿಗ್ಗೆ 8 ಗಂಟೆಗೆ ಲಕ್ಷ್ಮೀನರಸಿಂಹಸ್ವಾಮಿ ಹಾಗೂ ವಿಖನಸಾಚಾರ್ಯ-ರಿಗೆ ಫಲ ಪಂಚಾಮೃತಾಭಿಷೇಕ ಮತ್ತು ಮಹಾಮಂಗಳಾರತಿ ನೆರವೇರಲಿದೆ. ಬೆಳಿಗ್ಗೆ 9.30ಕ್ಕೆ ರಾಷ್ಟ್ರಪ್ರಶಸ್ತಿ ವಿಜೇತ ವಿದ್ವಾನ್ ಶಿವಕುಮಾರಚಾರ್ ಅವರಿಂದ ಗಾಯನ ಕಾರ್ಯಕ್ರಮ ನಡೆಯಲಿದೆ.

ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಕೋಟೆ ರಾಜಬೀದಿಯಲ್ಲಿ ಮಂಗಳವಾದ್ಯಗಳೊಂದಿಗೆ ಲಕ್ಷ್ಮೀನರಸಿಂಹಸ್ವಾಮಿ ಹಾಗೂ ವಿಖನಸಾಚಾರ್ಯರ ಉತ್ಸವ ಮೆರವಣಿಗೆ ಜರುಗಲಿದೆ. ಈ ಸಂದರ್ಭದಲ್ಲಿ ಶಾರದಾಶಂಕರ, ಸೌಂದರ್ಯಲಹರಿ, ವಾಸವಿ, ಹರಿದಾಸ, ಮಾರುತಿ, ಬನಶಂಕರಿ, ಕುರುಹಿನಶೆಟ್ಟಿ ಹಾಗೂ ಸತ್ಯಸಾಯಿ ಭಜನಾ ಮಂಡಳಿಗಳ ಸದಸ್ಯರು ದೇವರನಾಮ ಪಠಿಸಲಿದ್ದಾರೆ.

ಉತ್ಸವ ದೇವಾಲಯಕ್ಕೆ ಮರಳಿದ ಬಳಿಕ ಮಧ್ಯಾಹ್ನ 12 ಗಂಟೆಯಿಂದ ಹೋಮ, ಪೂರ್ಣಾಹುತಿ ಹಾಗೂ ಮಹಾಮಂಗಳಾರತಿ ನಡೆಯಲಿವೆ. ನಂತರ ಭಕ್ತರಿಗೆ ತೀ ರ್ಥಪ್ರಸಾದ ವಿತರಣೆ ಮತ್ತು ಅನ್ನಸಂತರ್ಪಣೆ ಏರ್ಪಡಿಸಲಾಗಿದೆ.

ಎಲ್ಲ ಪೂಜಾ ವಿಧಿವಿಧಾನಗಳು ಎಚ್.ಎಸ್. ರಾಮಸ್ವಾಮಿ ಭಟ್ಟರ ಮಾರ್ಗದರ್ಶನದಲ್ಲಿ ನಡೆಯಲಿದ್ದು, ಗ್ರೀನ್‌ವುಡ್ ಆಂಗ್ಲಮಾಧ್ಯಮ ಶಾಲೆಯ ಮಕ್ಕಳಿಂದ ಅಯ್ಯಪ್ಪಸ್ವಾಮಿ ನೃತ್ಯ ಪ್ರದರ್ಶನವೂ ಇರಲಿದೆ ಎಂದು ಅರ್ಚಕ ನಾರಾಯಣ ಭಟ್ ತಿಳಿಸಿದ್ದಾರೆ.

ಆಸ್ಪತ್ರೆ ನಿರ್ಮಾಣದಲ್ಲಿ ಲೋಪದ ಶಂಕೆ

ನೀಲನಕ್ಷೆ, ತಾಂತ್ರಿಕ ದಾಖಲೆ ಬಹಿರಂಗಪಡಿಸಲು ಪ್ರವೀಣ್ ಒತ್ತಾಯ

ಪ್ರಜಾ ಭಾರತ ವರದಿ

ಹಾಸನ: ಆಸ್ಪತ್ರೆ ನಿರ್ಮಾಣ ಕಾಮಗಾರಿಯ ಗುಣಮಟ್ಟದ ಬಗ್ಗೆ ಅನುಮಾನಗಳು ವ್ಯಕ್ತವಾಗಿದ್ದು, ಸೀಲಿಂಗ್, ಅಗ್ನಿ ಸುರಕ್ಷತೆ, ಆಕ್ಸಿಜನ್ ಪೈಪ್‌ಲೈನ್ ಹಾಗೂ ಜನರೇಟ-ರ್ ಅಳವಡಿಕೆ ಸೇರಿದಂತೆ ಎಲ್ಲ ಕಾಮಗಾರಿಗಳನ್ನು ತಾಂತ್ರಿಕ ತಜ್ಞರಿಂದ ಪರಿಶೀಲಿಸಬೇಕು ಎಂದು ಸಾಮಾಜಿಕ ಕಾರ್ಯಕರ್ತ ಪ್ರವೀಣ್ ಆಗ್ರಹಿಸಿದರು.

ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆಸ್ಪತ್ರೆಯ ಕಟ್ಟಡ ನಿರ್ಮಾಣ ಪೂರ್ಣಗೊಂಡಿದೆ ಎಂದು ಅಧಿಕಾರಿಗಳು ಹೇಳುತ್ತಿದ್ದರೂ, ರೋಗಿಗಳ ಸುರಕ್ಷತೆಗೆ ಅಗತ್ಯವಿರುವ ಎಲ್ಲ ಸೌಲಭ್ಯಗಳು ನಿಯಮಾನುಸಾರ ಅಳವಡಿಕೆಯಾಗಿವೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದರು.

ಆಸ್ಪತ್ರೆಯ ಒಳಾಂಗಣ ಕಾಮಗಾ-



ರಿಯಲ್ಲಿ ಸೀಲಿಂಗ್‌ನ ಗುಣಮಟ್ಟ, ಅಗ್ನಿ ಸುರಕ್ಷತಾ ಪೈಪ್‌ಗಳ ಅಳವಡಿಕೆ ಹಾಗೂ ಇತರ ತಾಂತ್ರಿಕ ವ್ಯವಸ್ಥೆಗಳ ಬಗ್ಗೆ ಅನುಮಾನಗಳಿವೆ. ಆಕ್ಸಿಜನ್ ಪೂರೈಕೆ ವ್ಯವಸ್ಥೆ, ವಿದ್ಯುತ್ ಸಂಪರ್ಕ ಮತ್ತು ಜನರೇಟ-ರ್ ಅಳವಡಿಕೆ ಮೂಲ ನೀಲನಕ್ಷೆ ಹಾಗೂ ಅನುಮೋದಿತ ತಾಂತ್ರಿಕ ವಿನ್ಯಾಸಕ್ಕೆ ಅನುಗುಣವಾಗಿದೆಯೇ ಎಂಬುದನ್ನು ಪರಿಶೀಲಿಸಬೇಕು ಎಂದು ಒತ್ತಾಯಿಸಿದರು.

ಕಾಮಗಾರಿಗೆ ಸಂಬಂಧಿಸಿದ ಮೂಲ ಕಡತ, ಅನುಮೋದಿತ ನೀಲನಕ್ಷೆ, ತಾಂತ್ರಿಕ ವಿನ್ಯಾಸ ಹಾಗೂ ಇತರ ದಾಖಲೆಗಳನ್ನು ಕೇಳಿದಾಗ ಸ್ಪಷ್ಟ ಮಾಹಿತಿ ದೊರೆಯುತ್ತಿಲ್ಲ ಎಂಬ ಆರೋಪವನ್ನೂ ಅವರು ಮಾಡಿದರು.

ಸಾರ್ವಜನಿಕರ ಹಣದಲ್ಲಿ ನಿರ್ಮಾಣವಾಗಿರುವ ಆಸ್ಪತ್ರೆಯ ಕಾಮಗಾರಿಯ ಬಗ್ಗೆ ಪಾರದರ್ಶಕತೆ ಇರಬೇಕು. ಅರ್ಹ ತಾಂತ್ರಿಕ ತಜ್ಞರ ತಂಡದಿಂದ ಸ್ವತಂತ್ರ ಪರಿಶೀಲನೆ ನಡೆಸಿ, ಲೋಪಗಳು ಕಂಡುಬಂದರೆ ಅವುಗಳನ್ನು ಸರಿಪಡಿಸಿದ ಬಳಿಕವೇ ಆಸ್ಪತ್ರೆಯನ್ನು ಸಾರ್ವಜನಿಕರ ಸೇವೆಗೆ ಮುಕ್ತಗೊಳಿಸಬೇಕು ಎಂದು ಪ್ರವೀಣ್ ಆಗ್ರಹಿಸಿದರು.



ಪ್ರಜಾ ಭಾರತ ವರದಿ

ಸಕಲೇಶಪುರ: ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಸೇ-ರಿದಂತೆ ರಾಜ್ಯದ ಸ್ಥಳೀಯ ಸಂಸ್ಥೆಗಳಿಗೆ ಕಳೆದ 10 ವರ್ಷಗಳಿಂದ ಚುನಾವಣೆ ನಡೆಸದಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಯನ್ನೇ ಪ್ರಶ್ನಿಸುವಂತಿದೆ ಎಂದು ಕರ್ನಾಟಕದ ಮಾಜಿ ಚುನಾವಣಾ ಮುಖ್ಯ ಆಯುಕ್ತ ಪಿ.ಎನ್. ಶ್ರೀನಿವಾಸಾಚಾರ್ ಕಳವಳ ವ್ಯಕ್ತಪಡಿಸಿದರು.

ತಾಲ್ಲೂಕು ವಿಶ್ವಕರ್ಮ ಸಮಾಜದ ವತಿಯಿಂದ ಭಾನುವಾರ ನಡೆದ ವಿಶ್ವಕರ್ಮ ಮಹೋತ್ಸವದಲ್ಲಿ ಮಾತನಾಡಿದ ಅವರು, ಸ್ಥಳೀಯ ಸಂಸ್ಥೆಗಳಿಗೆ ನಿಗದಿತ ಅವಧಿಯಲ್ಲಿ ಚುನಾವಣೆ ನಡೆಸಿ ಜನಪ್ರತಿನಿಧಿಗಳಿಗೆ ಅಧಿಕಾರ ಹಸ್ತಾಂತರಿಸಬೇಕು. ಆಡಳಿತಾಧಿಕಾರಿಗಳ ಆಡಳಿತವನ್ನು ನಿರಂತರವಾಗಿ ಮುಂದುವರಿಸುವುದು ಸರಿಯಲ್ಲ ಎಂದರು.

ವಿಶ್ವಕರ್ಮ ಸಮುದಾಯದವರು ಸಂಖ್ಯಾಬಲ ಕಡಿಮೆ ಎಂಬ ಹಿಂಜ-ರಿಕೆ ಬಿಟ್ಟು ಚುನಾವಣೆಯಲ್ಲಿ ಸ್ಪರ್ಧಿಸಬೇಕು. ಗೆದ್ದರೆ ಜನಪ್ರತಿನಿಧಿಯಾಗುತ್ತೀರಿ, ಸೋತರೆ ನಾಯಕನಾಗುತ್ತೀರಿ ಎಂದು ಕರೆ ನೀಡಿದರು. ಕರ್ನಾಟಕ ರಾಜ್ಯ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಪಿ. ಸುಜ್ಞಾನಮೂರ್ತಿ ಮಾತನಾಡಿ, ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ನಿಗಮದಿಂದ ಹೊಲಿಗೆ ಯಂತ್ರ ಸೇರಿದಂತೆ ವಿವಿಧ ಸ್ವಯಂ ಉದ್ಯೋಗದ ಉಪಕರಣಗಳನ್ನು ನೀಡಲಾಗುತ್ತಿದೆ. ಅರ್ಹರು ಸೌಲಭ್ಯಗಳನ್ನು ಬಳಸಿಕೊಳ್ಳಬೇಕು ಎಂದರು.

ಬೈರಾಪುರ ಟೋಲ್‌ನಲ್ಲಿ ಪ್ರಯಾಣಿಕರಿಗೆ ಸಂಕಷ್ಟ: ಅಧಿಕಾರಿಗಳು ಎಚ್ಚೆತ್ತುಕೊಳ್ಳಲಿ



ಪ್ರಜಾ ಭಾರತ ವರದಿ

ಸಕಲೇಶಪುರ: ಸಕಲೇಶಪುರ-ಹಾಸನ ರಾಷ್ಟ್ರೀಯ ಹೆದ್ದಾರಿಯ ಬೈರಾಪುರ ಟೋಲ್‌ನಲ್ಲಿ ಫಾಸ್ಟ್‌ಟ್ಯಾಗ್ ಸ್ಕ್ಯಾನಿಂಗ್ ಸಮಸ್ಯೆಯಿಂದ ವಾಹನ ಸವಾರರು ತೊಂದರೆ ಅನುಭವಿಸುತ್ತಿರುವ ಘಟನೆ ಮತ್ತೆ ಚರ್ಚೆಗೆ ಗ್ರಾಸವಾಗಿದೆ. ಒಂದು ವಾಹನದ ಫಾಸ್ಟ್‌ಟ್ಯಾಗ್ ಸಮಸ್ಯೆಯಿಂದ ಹಿಂಬದಿಯ ವಾಹನಗಳನ್ನೂ ತಡೆದು, ಸುಮಾರು ಅರ್ಧ ಗಂಟೆ ಕಾಯುವಂತೆ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಈ ಬಗ್ಗೆ ಪ್ರಶ್ನಿಸಿದ ಪ್ರಯಾಣಿಕರೊಂದಿಗೆ ಸಿಬ್ಬಂದಿ ಅನುಚಿತವಾಗಿ ವರ್ತಿಸಿ ಬೆದರಿಕೆ ಹಾಕಿದ್ದಾರೆ ಎನ್ನಲಾಗಿದೆ.

ಟೋಲ್‌ನಲ್ಲಿ ಇಂತಹ ಘಟನೆಗಳು ಆಗಾಗ್ಗೆ ಮರುಕಳಿಸುತ್ತಿರುವುದು ಸಾರ್ವಜನಿಕರಲ್ಲಿ ಅಸಮಾಧಾನ ಮೂಡಿಸಿದೆ. ಸುಗಮ ಸಂಚಾರಕ್ಕಾಗಿ ಜಾ-ರಿಗೆ ಬಂದ ಫಾಸ್ಟ್‌ಟ್ಯಾಗ್ ವ್ಯವಸ್ಥೆಯೇ ಪ್ರಯಾಣಿಕರಿಗೆ ವಿಳಂಬ ಮತ್ತು ಕಿರಿಕಿರಿ ಉಂಟುಮಾಡುವಂತಾಗಬಾರದು ಎಂಬುದು ವಾಹನ ಸವಾರರ ಅಭಿಪ್ರಾಯವಾಗಿದೆ.

● ಇನ್ನಾದರೂ ಜನಪ್ರತಿನಿಧಿಗಳು ಗಮನಹರಿಸಲಿ

ಕ್ಷೇತ್ರದ ಉಸ್ತುವಾರಿ ಸಚಿವರು, ಶಾಸಕರು, ಸಂಸದರು ಹಾಗೂ ಜಿಲ್ಲಾಡಳಿತ ಈ ಸಮಸ್ಯೆಯನ್ನು ನಿರ್ಲಕ್ಷಿಸದೆ ತಕ್ಷಣ ಮಧ್ಯಪ್ರವೇಶಿಸಬೇಕು. ಟೋಲ್ ನಿರ್ವಹಣೆಯಲ್ಲಿನ ಲೋಪಗಳ ಬಗ್ಗೆ ಪರಿಶೀಲನೆ ನಡೆಸಿ, ಫಾಸ್ಟ್‌ಟ್ಯಾಗ್ ತಾಂತ್ರಿಕ ಸಮಸ್ಯೆ ಎದುರಾದಾಗ ಪರ್ಯಾಯ ವ್ಯವಸ್ಥೆ ಕಲ್ಪಿಸುವುದರ ಜೊತೆಗೆ ಪ್ರಯಾಣಿಕರೊಂದಿಗೆ ಗೌರವಯುತವಾಗಿ ವರ್ತಿಸುವಂತೆ ಸಿಬ್ಬಂದಿಗೆ ಸೂಚನೆ ನೀಡಬೇಕು. ಸಾರ್ವಜನಿಕರು ಮತ್ತೆ ಮತ್ತೆ ತೊಂದರೆ ಅನುಭವಿಸದಂತೆ ಸೂಕ್ತ ಕ್ರಮ ಕೈಗೊಂಡು, ಬೈರಾಪುರ ಟೋಲ್‌ನಲ್ಲಿ ಶಾಂತಿಯುತ ಮತ್ತು ಸುಗಮ ಸಂಚಾರಕ್ಕೆ ಶಾಶ್ವತ ಪರಿಹಾರ ಒದಗಿಸಬೇಕೆಂಬುದು ಸಾರ್ವಜನಿಕರ ಒತ್ತಾಯವಾಗಿದೆ.

ನ್ಯೂಸ್ ಫಸ್ಟ್ ವರದಿಗಾರ ಕಿರಣ್ ವಿ. ಅವರಿಗೆ ಸನ್ಮಾನ

ಪ್ರಜಾ ಭಾರತ ವರದಿ

ಹಾಸನ: ಟಿಎನ್‌ಐಟಿ ಇಂಡಿಂ-ಯಾ ಮೀಡಿಯಾ ಪ್ರಶಸ್ತಿಗೆ ಭಾಜನರಾದ ನ್ಯೂಸ್ ಫಸ್ಟ್ ಸುದ್ದಿ ವಾಹಿನಿಯ ಹಾಸನ ಜಿಲ್ಲಾ ವರದಿಗಾರ ಕಿರಣ್ ವಿ. ಅವರನ್ನು ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ, ಕಿರಣ್ ಅವರು ವೃತ್ತಿಪರ ಬದ್ಧತೆ, ವಸ್ತುನಿಷ್ಠ ವರದಿಗಾರಿಕೆ ಹಾಗೂ ಸರಳ ವ್ಯಕ್ತಿತ್ವದ ಮೂಲಕ ಪತ್ರಿಕೋದ್ಯಮದಲ್ಲಿ ತಮ್ಮದೇ ಆದ ಗುರುತನ್ನು ಮೂಡಿಸಿದ್ದಾರೆ. ಅವರಿಗೆ ಪ್ರಶಸ್ತಿ ಲಭಿಸಿರುವುದು ಸಂತಸದ ವಿಚಾರ ಎಂದರು.

ಸಂಘದ ಮಾಜಿ ಅಧ್ಯಕ್ಷ ಬಾಳುಗೋಪಾಲ್ ಮಾತನಾಡಿ, ದಕ್ಷಿಣ ಭಾರತದ ಐದು ರಾಜ್ಯಗಳ ವ್ಯಾಪ್ತಿಯಲ್ಲಿ ಕಿರಣ್ ಅವರ ಸಾಧನೆಯನ್ನು ಗುರುತಿಸಿ ಪ್ರಶಸ್ತಿ ನೀಡಿರುವುದು ಹಾಸನ ಜಿಲ್ಲೆಗೆ ಹೆಮ್ಮೆಯ ಸಂಗತಿ. ಇದು ಅವರ



ಪ್ರಾಮಾಣಿಕ ಸೇವೆಗೆ ಸಂದ ಗೌರವ ಎಂದು ಹೇಳಿದರು.

ಸಂಘದ ಉಪಾಧ್ಯಕ್ಷ ಎನ್. ನಂಜುಂಡೇಗೌಡ, ಖಜಾಂಚಿ ಪ್ರಕಾಶ್ ಬೆಳವಾಡಿ, ಕಾರ್ಯದರ್ಶಿ ಕೆ.ಎಂ. ಹ-ರೀಶ್, ಟಿವಿ9 ಜಿಲ್ಲಾ ವರದಿಗಾರ ಕೆ.ಬಿ. ಮಂಜುನಾಥ್, ಹಾಸನ ಟಿವಿ ಮುಖ್ಯಸ್ಥ ತೌಫಿಕ್ ಅಹಮದ್, ಪತ್ರಕರ್ತರಾದ ಮಲ್ಲಿಕಾರ್ಜುನ ಕೊಚ್ಚರಗಿ ಹಾಗೂ ಕಿರಣ್ ರಾವ್ ಸಿ.ಎಸ್. ಅವರು ಕಿರಣ್ ಅವರ ಮಾನವೀಯ ಗುಣ, ಸರಳತೆ, ಸಹಕಾರ ಮನೋಭಾವ ಮತ್ತು ವೃತ್ತಿನಿಷ್ಠೆಯನ್ನು ಶ್ಲಾಘಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಕಿರಣ್ ವಿ., ಕಳೆದ 17 ವರ್ಷಗಳಿಂದ ಹಾಸನ ಜಿಲ್ಲೆಯಲ್ಲಿ ಪತ್ರಕರ್ತನಾಗಿ ಸೇವೆ ಸಲ್ಲಿಸುತ್ತಿದ್ದು, ಈ ಪ್ರಶಸ್ತಿಯನ್ನು ಹಿರಿಯರ ಪ್ರೋತ್ಸಾಹದಿಂದ ಸ್ವೀಕ-ರಿಸಿದ್ದೇನೆ. ಶಿವಮೊಗ್ಗ ನನ್ನ ಮೊದಲ ತವರು ಮನೆಯಾದರೆ, ಹಾಸನ ನನ್ನ ಎರಡನೇ ತವರು ಮನೆಯಾಗಿದೆ. ಇಲ್ಲಿನ ಜನರು, ಹಿರಿಯರು ಹಾಗೂ ಪತ್ರಕರ್ತ ಮಿತ್ರರು ನೀಡಿದ ಪ್ರೀತಿ, ವಿಶ್ವಾಸ ಮತ್ತು ಸಹಕಾರವನ್ನು ಜೀವನಪೂರ್ತಿ ಮರೆಯುವುದಿಲ್ಲ ಎಂದು ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪತ್ರಕರ್ತರ ಸಂಘದ ಪದಾಧಿಕಾರಿಗಳು ಹಾಗೂ ವಿವಿಧ ಸುದ್ದಿ ವಾಹಿನಿಗಳ ವರದಿಗಾರರು ಉಪಸ್ಥಿತರಿದ್ದರು.

ತೊಳಲು ಸಹಕಾರ ಸಂಘದ ಉಪಾಧ್ಯಕ್ಷರಾಗಿ ದಿನೇಶ್ ಅವಿರೋಧ ಆಯ್ಕೆ



ಪ್ರಜಾ ಭಾರತ ವರದಿ

ಬೇಲೂರು: ತಾಲ್ಲೂಕಿನ ತೊಳಲು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಉಪಾಧ್ಯಕ್ಷರಾಗಿ ದಿನೇಶ್ ಅವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ.

ಸಂಘದ ಸಭಾಂಗಣದಲ್ಲಿ ನಡೆದ ಆಯ್ಕೆ ಪ್ರಕ್ರಿಯೆಯಲ್ಲಿ ಎಲ್ಲಾ ನಿರ್ದೇಶಕರ ಬೆಂಬಲದೊಂದಿಗೆ ದಿನೇಶ್ ಅವರು ಅವಿರೋಧವಾಗಿ ಆಯ್ಕೆಯಾದರು. ಈ ಹಿನ್ನೆಲೆಯಲ್ಲಿ ನಡೆದ ಅಭಿನಂದನಾ ಸಮಾರಂಭದಲ್ಲಿ ಸಂಘದ ಅಧ್ಯಕ್ಷರು, ನಿರ್ದೇಶಕರು ಹಾಗೂ ಸ್ಥಳೀಯ ಮುಖಂಡರು ನೂತನ ಉಪಾಧ್ಯಕ್ಷರನ್ನು ಶಾಲು ಹೊದಿಸಿ, ಹೂಗುಚ್ಛ ನೀಡಿ ಗೌರವಿಸಿ ಶುಭ ಹಾರೈಸಿದರು.

ನಂತರ ಮಾತನಾಡಿದ ದಿನೇಶ್, ರೈತರ ಹಿತಾಸಕ್ತಿ ಕಾಪಾಡುವುದು ಹಾಗೂ ಸಹಕಾರ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು. ರೈತರ ಆರ್ಥಿಕ ಪ್ರಗತಿಗೆ ಪೂರಕವಾಗಿ ಕಾರ್ಯನಿರ್ವಹಿಸುವುದರ ಜತೆಗೆ, ಸಂಘದ ಸೌಲಭ್ಯಗಳು ಪ್ರತಿಯೊಬ್ಬ ರೈತನಿಗೂ ತಲುಪುವಂತೆ ಪಾರದರ್ಶಕ ಆಡಳಿತ ನೀಡಲಾಗುವುದು ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ಮುಖಂಡರಾದ ಮಂಜುನಾಥ್, ವೆಂಕಟೇಶ್, ಪ್ರಸನ್ನ, ಸಾಮ್ರಾಟ್, ಸಾಂಗ್ಲಿಯಾನ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಪ್ರಜಾ ಭಾರತ ವರದಿ

ಹಾಸನ: ಬರ ಪರಿಹಾರ ವಿತರಣೆ, ಬಗರ್‌ಹುಕುಂ ಸಾಗುವಳಿ ಜಮೀನುಗಳ ಮಂಜೂರಾತಿ ಹಾಗೂ ಬಡ ರೈತರಿಗೆ ನಿವೇಶನ ಹಂಚಿಕೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಅ.28ರಂದು ಬೆಂಗಳೂರಿನಲ್ಲಿ ಹಮ್ಮಿಕೊಂಡಿರುವ ವಿಧಾನಸೌಧ ಮುತ್ತಿಗೆ ಮತ್ತು ಬೃಹತ್ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ಹಾಸನ ಜಿಲ್ಲೆಯ ರೈತರು ಮಂಗಳವಾರ ರೈಲಿನಲ್ಲಿ ಬೆಂಗಳೂರಿನತ್ತ ಪ್ರಯಾಣ ಬೆಳೆಸಿದರು.

ಅರ್ಹ ರೈತರಿಗೆ ಬಗರ್‌ಹುಕುಂ ಜಮೀನು ಮಂಜೂರು ಮಾಡಬೇಕು, ಬರ ಪರಿಹಾರ ವಿತರಿಸಬೇಕು ಹಾಗೂ ನಿವೇಶನ ರಹಿತ ಬಡ ರೈತರಿಗೆ ನಿವೇಶನ ಒದಗಿಸಬೇಕು ಎಂಬುದು ರೈತರ ಪ್ರಮುಖ ಬೇಡಿಕೆಗಳಾಗಿವೆ. ರೈತರ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಿ ಸೂಕ್ತ ಪರಿಹಾರ ಕ್ರಮ ಕೈಗೊಳ್ಳಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ.

ತೆರೆಮರೆಯ ಕಲಾವಿದರಿಗೆ ಪ್ರಜಾ ಭಾರತ ವೇದಿಕೆ

ಕಲೆಯನ್ನು ಗುರುತಿಸಿ, ಕಲಾವಿದರನ್ನು ಗೌರವಿಸುವ ಕಾರ್ಯ ಶ್ಲಾಘನೀಯ: ಡಾ. ನರಸಿಂಹಸ್ವಾಮಿ

ಪ್ರಜಾ ಭಾರತ ವರದಿ

ಬೇಲೂರು: ಸಮಾಜದ ಮುಂದೆ ತೆರೆಮರೆಯಲ್ಲಿರುವ ಪ್ರತಿಭೆಗಳನ್ನು ಗುರುತಿಸಿ, ಅವರ ಸಾಧನೆಗೆ ಅಕ್ಷರಗಳ ಮೂಲಕ ಗೌರವ ತಂದುಕೊಡುವುದೇ ನಿಜವಾದ ಪತ್ರಿಕಾ ಧರ್ಮ. ಈ ಮಹತ್ತರ ಕಾರ್ಯವನ್ನು ಪ್ರಜಾ ಭಾರತ ಪತ್ರಿಕೆಯ ಪ್ರಧಾನ ಸಂಪಾದಕ ದಿನೇಶ್ ಬೆಳ್ಳಾವರ ಮತ್ತು ಅವರ ತಂಡ ಮಾಡುತ್ತಿರುವುದು ಅತ್ಯಂತ ಸಂತೋಷದ ವಿಚಾರ ಎಂದು ಡಾ. ನರಸಿಂಹಸ್ವಾಮಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಸಂಗೀತ ಮತ್ತು ಸಂಗೀತ ವಾದ್ಯಗಳನ್ನು ಕಲಿಯಲು ವರ್ಷಗಳ ಪರಿಶ್ರಮ, ನಿರಂತರ ಅಭ್ಯಾಸ ಹಾಗೂ ಅಪಾರ ತಾಳ್ಮೆ ಅಗತ್ಯ. ಆದರೆ ಇಂದಿನ ಡಿಜೆ ಸಂಸ್ಕೃತಿಯ ಅಬ್ಬರದಲ್ಲಿ ಸಾಂಪ್ರದಾಯಿಕ ಸಂಗೀತ ಮತ್ತು ವಾದ್ಯಕಲೆಯನ್ನು ನಂಬಿಕೊಂಡಿರುವ ಅನೇಕ ಪ್ರತಿಭಾವಂತ ಕಲಾವಿದರು ತೆರೆಮರೆಗೆ ಸರಿಯುತ್ತಿರುವುದು ವಿಷಾದನೀಯ. ಇಂತಹ ಸಂದರ್ಭದಲ್ಲಿ ಕಲಾವಿದರ ಪ್ರತಿಭೆಯನ್ನು ಗುರುತಿಸಿ,



ಅವರ ಸಾಧನೆಯನ್ನು ಪತ್ರಿಕೆಯ ಮೂಲಕ ಜನರಿಗೆ ಪರಿಚಯಿಸುತ್ತಿರುವ ದಿನೇಶ್ ಬೆಳ್ಳಾವರ ಅವರ ಕಾರ್ಯ ನಿಜಕ್ಕೂ ಅಭಿನಂದನೀಯ.

ಬೇಲೂರು ತಾಲೂಕಿನಲ್ಲಿ ಸಂಗೀತ, ವಾದ್ಯಕಲೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅಪಾರ ಪ್ರತಿಭೆ ಹೊಂದಿರುವ ಅನೇಕ ಕಲಾವಿದರಿದ್ದಾರೆ. ಆದರೆ ಸೂಕ್ತ ವೇದಿಕೆ ಹಾಗೂ ಪ್ರಚಾರದ ಕೊರತೆಯಿಂದ ಅವರ ಪ್ರತಿಭೆ ಜನರಿಗೆ ಪರಿಚಯವಾಗದೆ ಉಳಿದಿದೆ. ಇಂತಹ ಕಲಾವಿದರನ್ನು ಗುರುತಿಸಿ, ಅವರ ಸಾಧನೆಗೆ ಪ್ರಜಾ ಭಾರತ ಪತ್ರಿಕೆಯಲ್ಲಿ ಅವಕಾಶ ಕಲ್ಪಿಸುವ ಮೂಲಕ ಅವರ ಬದುಕಿಗೆ ಹೊಸ ಭರವಸೆ ಮೂಡಿಸುವ ಕೆಲಸವಾಗುತ್ತಿದೆ.

ಪತ್ರಿಕೆ ಎಂದರೆ ಕೇವಲ ಸುದ್ದಿ ಪ್ರಕಟಿಸುವ ಮಾಧ್ಯಮವಲ್ಲ, ಸಮಾಜದ ಪ್ರತಿಭೆಗಳಿಗೆ ಬೆಳಕಾಗುವ ವೇದಿಕೆಯೂ ಹೌದು. ತೆರೆಮರೆಯ ಕಲಾವಿದರನ್ನು ಜನರ ಮುಂದೆ ತರುವ ಮೂಲಕ ಪತ್ರಿಕಾ ಧರ್ಮಕ್ಕೆ ಹೊಸ ಅರ್ಥ ನೀಡುತ್ತಿರುವ ದಿನೇಶ್ ಬೆಳ್ಳಾವರ ಅವರಿಗೆ ಎಷ್ಟು ಕೃತಜ್ಞತೆ ಸಲ್ಲಿಸಿದರೂ ಸಾಲದು.ಮುಂದಿನ ದಿನಗಳಲ್ಲಿಯೂ ಬೇಲೂರು ತಾಲೂಕಿನ ವಿವಿಧ ಕಲಾ ಪ್ರಕಾರಗಳಲ್ಲಿ ತೊಡಗಿಸಿಕೊಂಡಿರುವ ಪ್ರತಿಭಾವಂತರನ್ನು ಗುರುತಿಸಿ, ಅವ-ರಿಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಕಾರ್ಯವನ್ನು ಮುಂದುವರಿಸಬೇಕು ಎಂದು ಮನವಿ ಮಾಡುತ್ತೇನೆ. ಕಲಾವಿದರ ಸಾಧನೆಗೆ ಗೌರವ ತಂದುಕೊಡುವ ಈ ಸೇವೆ ನಿರಂತರವಾಗಿ ಸಾಗಲಿ ಎಂದು ಹಾರೈಸುತ್ತೇನೆ ಎಂದು ಡಾ. ನರಸಿಂಹಸ್ವಾಮಿ ತಿಳಿಸಿದ್ದಾರೆ.

ರಾಮಾಯಣ ಭಾರತದ ಸಂಸ್ಕೃತಿಯ ಆದರ್ಶದ ಪ್ರತೀಕ: ಹಲ್ಲುಮನಿ ತಿಮ್ಮಣ್ಣ

ಪ್ರಜಾ ಭಾರತ ವರದಿ

ಸಕಲೇಶಪುರ: ರಾಮಾಯಣ ಭಾರತೀಯ ಸಂಸ್ಕೃತಿ ಮತ್ತು ಜೀವನ ಮೌಲ್ಯಗಳನ್ನು ಎತ್ತಿಹಿಡಿದ ಮಹಾನ್ ಗ್ರಂಥವಾಗಿದ್ದು, ದೇಶದ ಆ ದರ್ಶದ ಪ್ರತೀಕವಾಗಿದೆ ಎಂದು ಉಪ ವಿಭಾಗಾಧಿಕಾರಿ ಹಲ್ಲುಮನಿ ತಿಮ್ಮಣ್ಣ ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಹಿಂದಿನ ಕಾಲದಲ್ಲಿ ಮಕ್ಕಳಿಗೆ ರಾಮಾಯಣ ಓದಿಸುವ ಸಂಪ್ರದಾಯ ವಿತ್ತು. ಮಹರ್ಷಿ ವಾಲ್ಮೀಕಿ ರಚಿಸಿದ ಈ ಮಹಾನ್ ಕೃತಿ ಇಂದಿಗೂ ಜನರ ಬದುಕಿಗೆ ಪ್ರೇರಣೆಯಾಗಿದೆ ಎಂದರು.



ಮನುಷ್ಯನ ಆತ್ಮಸ್ಥೈರ್ಯ ಕುಗ್ಗಿದಾಗ ಅದನ್ನು ಹೆಚ್ಚಿಸಿ, ಸಾಧನೆಗೆ ಪ್ರೇರೇಪಿಸುವ ಸಂದೇಶ ರಾಮಾಯಣದಲ್ಲಿದೆ. ಹನುಮಂತ ಸಮುದ್ರೋಲ್ಲಂಘನೆ ಮಾಡಲು ಹಿಂಜರಿದಾಗ ಜಾಂಬವಂತ ಸೇರಿದಂತೆ ಇತರರು ಆತನ ಶಕ್ತಿಯನ್ನು ನೆನಪಿಸಿ ಆತ್ಮವಿಶ್ವಾಸ ತುಂಬಿದ ಪ್ರಸಂಗ ಇದಕ್ಕೆ ಉದಾಹರಣೆಯಾಗಿದೆ ಎಂದು ತಿಳಿಸಿದರು.

ರಾಮಾಯಣವನ್ನು ಎಷ್ಟು ಬಾರಿ ಓದಿದರೂ ಹೊಸ ಅರ್ಥಗಳು ಗೋಚ-ರಿಸುತ್ತವೆ. ಕುವೆಂಪು ಅವರು ಇದನ್ನು ರಾಮಾಯಣ ದರ್ಶನಂ ಕೃತಿಯಲ್ಲಿ ವಿಶಿಷ್ಟವಾಗಿ ಪ್ರತಿಪಾದಿಸಿದ್ದಾರೆ. ರಾಮ-ಲಕ್ಷ್ಮಣರಂತಹ ಆದರ್ಶ ಸಹೋದರರು, ತಂದೆಯ ಮಾತಿಗೆ ಗೌರವ ನೀಡುವ ರಾಮನ ಗುಣಗಳು ಪ್ರತಿಯೊಬ್ಬರಿಗೂ ಮಾದರಿಯಾಗಿವೆ ಎಂದರು.

ಭಾರತ ಮಾತ್ರವಲ್ಲದೆ ಶ್ರೀಲಂಕಾ, ಇಂಡೋನೇಷ್ಯಾ ಸೇರಿದಂತೆ ಹಲವು ದೇಶಗಳಲ್ಲಿಯೂ ರಾಮಾಯಣದ ಪ್ರಭಾವ ಹಾಗೂ ಭಾರತೀಯ ಸಂಸ್ಕೃತಿಯ ಛಾಪು ಕಾಣಬಹುದು. ರಾಮಾಯಣ ಭಾರತೀಯರ ನರನಾಡಿಗಳಲ್ಲಿ ಬೆರೆತಿರುವ ಮಹಾನ್ ಗ್ರಂಥವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರೊ. ಅಶೋಕ್ ಎಸ್.ಕೆ. ವಿಚಾರ ಮಂಡಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪ, ಸಮಾಜ ಕಲ್ಯಾಣಾಧಿಕಾರಿ ಸಿ.ಎಂ. ಮೋಹನ್ ಕುಮಾರ್, ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ತಾಲೂಕು ಪಂಚಾಯಿತಿ ಅಧಿಕಾರಿ ಆದಿತ್ಯ ಸೇರಿದಂತೆ ಹಲವರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ನಾಗ-ರಿಕರು, ಅಧಿಕಾರಿಗಳು ಹಾಗೂ ಮುಖಂಡರು ಭಾಗವಹಿಸಿದ್ದರು.

Printed, Published & Owned By Dinesh B G and Printed at Honalu Graphic, Word No. 2, Ashok Road Behind Stadium, Satyamangala Village, Vidya Nagara Hassan District, Karnataka - 573201 and Published at Ward No.1 Behind Budda School, Halebeedu Road Shanthi Nagara Bantenahalli Belur Taluk Hassan Dist, Karnataka - 573115 - Editor Dinesh B G